ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ
ದಿನಾಂಕ : DATE : 12/3/21

ಜಾರಕಿಹೊಳಿ ರಾಸಲೀಲೆ ಸಿ.ಡಿ ಪ್ರಕರಣದ ಸಂಬಂಧ ತನಿಖೆ । ಹೆಚ್ಚುವರಿ ಪೊಲೀಸ್ ಆಯುಕ್ತ ಸೌಮೇಂದು ಮುಖರ್ಜಿ ನೇತೃತ್ವದಲ್ಲಿ ಎಸ್‌ಐಟಿ ತಂಡ । ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಎಫ್‌ಐಆರ್ ದಾಖಲಾಗದಿದ್ದರೂ ಎಸ್‌ಐಟಿ ರಚನೆ

# ಎಸ್‌ಐಟಿ ತನಿಖೆಯ ಹಾದಿ ಹೇಗಿರಲಿದೆ?

12/3/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಸಂಚಲನ ಮೂಡಿಸಿರುವ ರಮೇಶ್ ಜಾರಕಿಹೊಳಿ ರಾಸಲೀಲೆ ಸಿ.ಡಿ ಪ್ರಕರಣದ ಸಂಬಂಧ ಎಸ್‌ಐಟಿ ತನಿಖೆ ನಡೆಸಲು ಸರಕಾರ ಮುಂದಾಗಿದ್ದು, ತನಿಖೆ ಹಾದಿ ಹೇಗಿರಲಿದೆ ಎಂಬುದು ಕುತೂಹಲ ಮೂಡಿಸಿದೆ.

ಹೆಚ್ಚುವರಿ ಪೊಲೀಸ್ ಆಯುಕ್ತ ಸೌಮೇಂದು ಮುಖರ್ಜಿ ನೇತೃತ್ವದಲ್ಲಿ ಎಸ್‌ಐಟಿ ತಂಡ ರಚನೆಯಾಗಲಿದೆ. ಶುಕ್ರವಾರ ಅಥವಾ ಶನಿವಾರ ಮತ್ತಷ್ಟು ಅಧಿಕಾರಿಗಳನ್ನು ಒಳಗೊಂಡ ವಿಶೇಷ ತಂಡ ರಚನೆ ಮಾಡಿ, ತನಿಖೆ ಕೈಗೊಳ್ಳಲಾಗುತ್ತದೆ. ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಎಫ್‌ಐಆರ್ ದಾಖಲಾಗದಿದ್ದರೂ ಎಸ್‌ಐಟಿ ರಚನೆಯಾಗಿದೆ. ಮೊದಲು ಎಸ್‌ಐಟಿ ತಂಡ ಕಬ್ಬನ್ ಪಾರ್ಕ್ ಪೊಲೀಸರಿಂದ ಇದುವರೆಗೆ ಮಾಡಿದ ತನಿಖಾ ವರದಿ ಪಡೆಯಲಿದೆ. ನಂತರ ಅಗತ್ಯಬಿದ್ದರೆ ದೂರುದಾರ ದಿನೇಶ್ ಕಲ್ಲಹಳ್ಳಿಗೆ ನೋಟಿಸ್ ನೀಡಿ ವಿಚಾರಣೆ ನಡೆಸುವ ಸಾಧ್ಯತೆಯಿದೆ.

- ಅಗತ್ಯಬಿದ್ದರೆ ದೂರುದಾರ ದಿನೇಶ್ ಕಲ್ಲಹಳ್ಳಿಗೆ ನೋಟಿಸ್ ನೀಡಿ ವಿಚಾರಣೆ
- ವಿಚಾರಣೆ ಸಂಬಂಧ ಯಾರನ್ನೂ ಬಂಧನ ಮಾಡಲು ಎಸ್‌ಐಟಿಗೆ ಸಂಪೂರ್ಣ ಅಧಿಕಾರ ನೀಡಿಲ್ಲ
- ನಕಲಿ ಸಿ.ಡಿ ಮಾಡಿದ್ದು ಯಾರು ಎಂದು ಗೊತ್ತಾಗಲಿ ಎಂಬ ಕಾರಣಕ್ಕೆ ತನಿಖಾ ತಂಡ: ಗೃಹಸಚಿವ

**ಸಂಬಂಧಿತರಿಗೆ ನೋಟಿಸ್:** ಜತೆಗೆ ತನಿಖೆ ವೇಳೆ ಪ್ರಕರಣ ಸಂಬಂಧಿತರಿಗೆ ನೋಟಿಸ್ ನೀಡಲಿದೆ. ಕೇಸ್‌ನಲ್ಲಿ ಯಾರದ್ದಾದರೂ ಕೈವಾಡ ಇರುವುದು ಕಂಡುಬಂದರೆ ಆ ಬಗ್ಗೆ ಸೂಕ್ತ ಸಾಕ್ಷ್ಯಾಧಾರ ಕಲೆ ಹಾಕಲಿದೆ. ಲಭ್ಯ ಸಾಕ್ಷ್ಯಾಧಾರದ ಆಧಾರದ ಮೇಲೆ ಸಂಬಂಧಿತ ವ್ಯಕ್ತಿಗಳಿಗೆ ಕಾನೂನು ಪ್ರಕಾರ ನೋಟಿಸ್ ನೀಡಿ ವಿಚಾರಣೆ ನಡೆಸಲಿದೆ. ಸರಕಾರಕ್ಕೆ ಸಲ್ಲಿಕೆಯಾಗುವ ಅಂತಿಮ ವರದಿಯಲ್ಲಿ ಪ್ರಕರಣದ ಸಂಬಂಧ ಸಾಕ್ಷ್ಯಾಧಾರ ಪತ್ತೆಯಾದರೆ ಎಫ್‌ಐಆರ್ ಹಾಕಲು ಸೂಕ್ತ ಎಂದು ಎಸ್‌ಐಟಿ ವರದಿ ನೀಡುವ ಸಾಧ್ಯತೆಯಿದೆ.

ಇದರ ಆಧಾರದ ಮೇಲೆ ಸರಕಾರದ ಸೂಚನೆ ಮೇರೆಗೆ ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಆರಂಭಿಸಲಿದೆ. ಕಾನೂನು ಪ್ರಕಾರ ಯಾರನ್ನಾದರೂ ಬಂಧಿಸಬೇಕಾದರೆ ಮೊದಲು ಎಫ್‌ಐಆರ್ ದಾಖಲಿಸಬೇಕು. ಇದರ ಆಧಾರದ ಮೇಲೆ ವಿಚಾರಣೆ ನಡೆಸಿ ಆರೋಪಿಗಳನ್ನು ಬಂಧಿಸಲು ಅವಕಾಶವಿದೆ. ಆದರೆ, ವಿಚಾರಣೆ ಸಂಬಂಧ ಯಾರನ್ನೂ ಬಂಧನ ಮಾಡಲು ಎಸ್‌ಐಟಿಗೆ ಸಂಪೂರ್ಣ ಅಧಿಕಾರ ನೀಡಿಲ್ಲ. ವಿಚಾರಣೆ ನಡೆಸಿ, ವರದಿ ನೀಡಿದ ನಂತರವಷ್ಟೇ ಸರಕಾರದ ಅನುಮತಿ ಪಡೆದು ಬಂಧನ ಮಾಡಲು ಅವಕಾಶವಿದೆ ಎಂದು ಹಿರಿಯ ಅಧಿಕಾರಿಗಳು ಹೇಳಿದ್ದಾರೆ.

**ಅಗತ್ಯವಿದ್ದರೆ ಎಫ್‌ಐಆರ್ ದಾಖಲು:** ಈ ನಡುವೆ ಪ್ರಕರಣದ ಸಂಬಂಧ ಮಾತನಾಡಿರುವ ಗೃಹಸಚಿವ ಬೊಮ್ಮಾಯಿ, ಸಿ.ಡಿ ಪ್ರಕರಣದಲ್ಲಿ ಯಾರು ನಕಲಿ ಸಿ.ಡಿ ಸೃಷ್ಟಿಸಿದ್ದಾರೆ ಎಂದು ಪತ್ತೆ ಹಚ್ಚಲು ಎಸ್‌ಐಟಿ ತನಿಖೆ ನಡೆಸಲಾಗುತ್ತಿದೆ. ಸಿ.ಡಿ ಹಿಂದೆ ಷಡ್ಯಂತ್ರ ಇದ್ದು, ತನಿಖೆ ಮಾಡುವಂತೆ ಜಾರಕಿಹೊಳಿ ಆಗ್ರಹಿಸಿದ್ದಾರೆ. ಇದನ್ನು ಪತ್ತೆ ಮಾಡಲು ಎಸ್‌ಐಟಿ ರಚಿಸಲಾಗಿದೆ. ತನಿಖೆ ನಡೆಸಿ ವರದಿ ಸಲ್ಲಿಸಲು ಎಸ್‌ಐಟಿಗೆ ಸಮಯ ನಿಗದಿ ಮಾಡಿಲ್ಲ. ಪ್ರಾಥಮಿಕ ತನಿಖೆ ನಂತರ ಎಫ್‌ಐಆರ್ ದಾಖಲಿಸಲಿದೆ. ಜಾರಕಿಹೊಳಿ ದೂರವಾಣಿ ಮೂಲಕ ತಮ್ಮೊಂದಿಗೆ ಮಾತನಾಡಿದ್ದಾರೆ. ತಾವು ನೀಡಿರುವ ಪತ್ರದ ಆಧಾರದ ಮೇಲೆ ತನಿಖೆ ಮಾಡಿ ಎಂದು ಹೇಳಿದ್ದಾರೆ. ಅದಕ್ಕಾಗಿ ತನಿಖೆಗೆ ಆದೇಶಿಸಲಾಗಿದೆ ಎಂದರು. ಡಿ.ಕೆ. ಶಿವಕುಮಾರ್ ಪ್ರತಿಕ್ರಿಯೆಗೆ ಸಂಬಂಧಿಸಿ ಮಾತನಾಡಿ, ನನ್ನನ್ನು ಆ ಮಟ್ಟಕ್ಕೆ ಇಳಿಸಬೇಡಿ. ನಕಲಿ ಸಿ.ಡಿ ಮಾಡಿದ್ದು ಯಾರೆಂದು ಗೊತ್ತಾಗಲಿ ಎಂಬ ಕಾರಣಕ್ಕೆ ತನಿಖಾ ತಂಡ ರಚನೆ ಮಾಡಿದ್ದೇವೆ ಎಂದರು.

## ನಾಗರಿಕ ಗೌಪ್ಯತೆ ಹಕ್ಕಿಗೆ ಧಕ್ಕೆಯಾಗಬಾರದು

**ಟಿವಿ ವಾಹಿನಿಗಳು ಗೌಪ್ಯತೆ ಹಕ್ಕನ್ನು ಉಲ್ಲಂಘಿಸುತ್ತಿವೆ ಎಂದು ಆರೋಪಿಸಿ ಸಲ್ಲಿಸಿರುವ ಅರ್ಜಿ ಸಂಬಂಧ ಮಾಧ್ಯಮಗಳಿಗೆ ನೋಟಿಸ್ ಜಾರಿ ಮಾಡಿರುವ ಹೈಕೋರ್ಟ್, ಸುದ್ದಿ ಮಾಧ್ಯಮಗಳು ನಾಗರಿಕರ ಗೌಪ್ಯತೆ ಹಕ್ಕನ್ನು ಕಸಿದುಕೊಳ್ಳಬಾರದು ಮತ್ತು ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ನಿಯಂತ್ರಣ ಕಾಯಿದೆ ನಿಯಮ ಪಾಲಿಸಬೇಕು ಎಂದು ಮಧ್ಯಂತರ ಆದೇಶ ಹೊರಡಿಸಿದೆ. ರಮೇಶ್ ಜಾರಕಿಹೊಳಿ ಸಿ.ಡಿ ಪ್ರಕರಣದಲ್ಲಿ ಮಾಧ್ಯಮಗಳು ವ್ಯಕ್ತಿಯ ಗೌಪ್ಯತೆ ಹಕ್ಕನ್ನು ಉಲ್ಲಂಘಿಸಿವೆ ಎಂದು ನಗರದ ವಕೀಲ ಆತ್ಮ ವಿ.ಹಿರೇಮಠ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ನ್ಯಾ. ಪಿ.ಎಸ್.ದಿನೇಶ್ ಕುಮಾರ್ ಅವರಿದ್ದ ಪೀಠ, ಮಾಧ್ಯಮಗಳಿಗೆ ಈ ನಿರ್ದೇಶನ ನೀಡಿದೆ. ಇದೇ ವೇಳೆ ಅರ್ಜಿಗೆ ಆಕ್ಷೇಪಣೆ ಸಲ್ಲಿಸುವಂತೆ ಮುದ್ರಣ, ಟಿವಿ, ಡಿಜಿಟಲ್ ಹಾಗೂ ಸಾಮಾಜಿಕ ಜಾಲತಾಣ ಸೇರಿ 73 ಮಾಧ್ಯಮಗಳಿಗೆ ನೋಟಿಸ್ ಜಾರಿ ಮಾಡಿದೆ.**